# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 198(167) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್(ಡಿಟಿಎಸ್)(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10.12.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೆಐಎಡಿಬಿ ವತಿಯಿಂದ ಕೈಗಾರಿಕೆ ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಇವು ಯಾವ ಹಂತದಲ್ಲಿವೆ; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು (ಕೆಐಎಡಿಬಿ) ಚಿತ್ರದುರ್ಗ ಜಿಲ್ಲೆಯ, ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಿರಿಯೂರು ತಾಲ್ಲೂಕಿನ ಮೇಟಿಕುರ್ಕೆ ಮತ್ತು ಕರಿಯೊಬೇನಹಳ್ಳಿ ಗ್ರಾಮಗಳಲ್ಲಿ ಮೇಟಿಕುರ್ಕೆ ಕೈಗಾರಿಕಾ ಪ್ರದೇಶವನ್ನು 1156.00 ಎಕರೆ ವಿಸ್ತೀರ್ಣದಲ್ಲಿ ಅಭಿವೃದ್ಧಿ ಪಡಿಸುತ್ತಿರುತ್ತದೆ.<br><br>ಈಗಾಗಲೇ ದಿನಾಂಕ: 07-08-2024 ರ ಅಧಿಸೂಚನೆಯ ಮೂಲಕ, ಸದರಿ ಕೈಗಾರಿಕಾ ಪ್ರದೇಶದಲ್ಲಿ ನಿವೇಶನ ಹಂಚಿಕೆಗೆ ಅರ್ಜಿಗಳನ್ನು ಆಹ್ವಾನಿಸಿದ್ದು, ದಿನಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಲಾಗಿದೆ. |
| ಆ | ಪ್ರವರ್ಗ-1ರ ಅತೀ ಹಿಂದುಳಿದ ಜಾತಿಗಳ ಉದ್ಯಮದಾರರಿಗೆ ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡುವಾಗ ಮೀಸಲಾತಿ ನಿಗದಿಪಡಿಸಲಾಗಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಸಿಐ 82 ಸಿಎಸ್‌ಸಿ 2016 ದಿನಾಂಕ:05-05-2016 ರನ್ವಯ ಕೆಐಎಡಿಬಿ ಅಭಿವೃದ್ಧಿಪಡಿಸುವ ಕೈಗಾರಿಕಾ ಪ್ರದೇಶಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ಪ್ರವರ್ಗ-1 ಮತ್ತು 2ಎ), ವಿಕಲಚೇತನ ಹಾಗೂ ಮಾಜಿ ಸೈನಿಕ ಉದ್ದಿಮೆದಾರರಿಗೆ ಕನಿಷ್ಠ ಶೇ.10 ರಷ್ಟು ನಿವೇಶನಗಳನ್ನು ಮೀಸಲಿಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸದರಿ ಆದೇಶದ ಪ್ರತಿಯನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ. |
| ಇ | ನಿಗದಿಪಡಿಸಿದ್ದಲ್ಲಿ ಯಾವ ಯಾವ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ನಿವೇಶನಗಳನ್ನು ನಿಗದಿಪಡಿಸಲಾಗಿದೆ ಹಾಗೂ ವಿತರಿಸಿರುವ ನಿವೇಶನಗಳ ಸಂಖ್ಯೆ ಎಷ್ಟು; | ಮಂಡಳಿಯು ಸದರಿ ಆದೇಶದ ದಿನಾಂಕದಿಂದ ರಾಜ್ಯಾದ್ಯಂತ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ಪ್ರವರ್ಗ-1 ಮತ್ತು 2ಎ), ವಿಕಲಚೇತನ ಹಾಗೂ ಮಾಜಿ ಸೈನಿಕ ಉದ್ದಿಮೆದಾರರಿಗೆ ಕನಿಷ್ಠ ಶೇ.10 ರಷ್ಟು ನಿವೇಶನಗಳನ್ನು ಮೀಸಲಿಟ್ಟು ಹಂಚಿಕೆ ಮಾಡುತ್ತಿರುತ್ತದೆ.<br><br>ಹಂಚಿಕೆ ಪ್ರದೇಶದಲ್ಲಿ ಮೇಲೆ ತಿಳಿಸಿದಂತೆ, ಒಟ್ಟಾರೆಯಾಗಿ ಶೇ.10 ರಷ್ಟು ಮೀಸಲಿಟ್ಟಿದ್ದು, ಪ್ರತ್ಯೇಕವಾಗಿ ಪ್ರವರ್ಗ-1 ರ ಉದ್ದಿಮೆದಾರರಿಗೆ ಮೀಸಲಿಟ್ಟಿರುವುದಿಲ್ಲ. |

| | | |
|---|---|---|
| ಈ | ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿಗಳ ಉದ್ದಿಮೆದಾರರಿಗೆ ರಿಯಾಯಿತಿ/ ಸಹಾಯಧನ ನೀಡಲಾಗಿದೆಯೇ; ಇಲ್ಲದೇ ಇದ್ದಲ್ಲಿ ಸಹಾಯಧನವನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉದ್ದಿಮೆದಾರರಿಗೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 76 ಎಸ್‌ಎಸ್‌ಐ 2019 ದಿನಾಂಕ:28-05-2020 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಿಐ 76 ಎಸ್‌ಎಸ್‌ಐ 2019 ದಿನಾಂಕ:16-02-2021 ರ ಆದೇಶಗಳನ್ವಯ ದಿನಾಂಕ:01-04-2019 ರಿಂದ ಅನ್ವಯವಾಗುವಂತೆ, ಹಂಚಿಕೆ ಮೊತ್ತದ ಮೇಲೆ ಶೇ.75 ರಷ್ಟು ರಿಯಾಯಿತಿ ನೀಡಿ, ನಿವೇಶನ ಹಂಚಿಕೆ ಮಾಡಲಾಗುತ್ತಿದೆ.<br><br>ಸದರಿ ಯೋಜನೆಯಲ್ಲಿ ಶೇ. 75 ರಷ್ಟು ರಿಯಾಯಿತಿ ಮೌಲ್ಯವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ (SCP/TSP) ಅಡಿಯಲ್ಲಿ ಹಂಚಿಕೆಯಾಗುವ ಆಯವ್ಯಯದಿಂದ ಭರಿಸಲಾಗುತ್ತಿದೆ ಮತ್ತು SCP/TSP ಯೋಜನೆಯಡಿಯಲ್ಲಿ ಈ ಕ್ರಾರ್ಯಕ್ರಮಕ್ಕೆ ರೂಪಿಸಲಾಗಿರುವ ಮಾರ್ಗಸೂಚಿಗಳನ್ನು ಪಾಲಿಸಲಾಗುತ್ತಿದೆ. |
| ಉ | ಕೈಗಾರಿಕಾ ನಿವೇಶನಗಳ ಹಂಚಿಕೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜಾತಿಗಳಿಗೆ ನೀಡುವ ಸಹಾಯಧನವನ್ನು ಪ್ರವರ್ಗ-1 ಜಾತಿಗಳಿಗೂ ನೀಡಲು ಇರುವ ತೊಂದರೆಗಳೇನು? (ವಿವರಿಸುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಐ 113 ಎಸ್‌ಪಿಐ 2017 ಬೆಂಗಳೂರು ದಿನಾಂಕ:28-12-2017 ರಲ್ಲಿ ಕೆಐಎಡಿಬಿ ಸಂಸ್ಥೆಯಿಂದ ಹಿಂದುಳಿದ ಪ್ರವರ್ಗ-1, ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ ರವರಿಗೆ ಹಂಚಿಕೆ ಮಾಡಲಾಗುವ ನಿವೇಶನಗಳ ಒಟ್ಟು ಮೊತ್ತದಲ್ಲಿ ಶೇ.25 ರಷ್ಟು ರಿಯಾಯಿತಿ ನೀಡಲು ತಾತ್ವಿಕ ಅನುಮೋದನೆ ನೀಡಿರುತ್ತದೆ. ಸದರಿ ಆದೇಶದಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ರಿಯಾಯಿತಿಯನ್ನು 1 ಎಕರೆಗೆ ಮತ್ತು ಇತರೆ ಜಿಲ್ಲೆಗಳಲ್ಲಿ 2 ಎಕರೆಗೆ ಸೀಮಿತಗೊಳಿಸಿರುತ್ತದೆ. ಸದರಿ ಆದೇಶವನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ.<br><br>ಮುಂದುವರೆದು, ದಿನಾಂಕ:05-09-2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಆರ್ಥಿಕ ಇಲಾಖೆಯು ಹಿಂದುಳಿದ ವರ್ಗಗಳಿಗೆ ಕೆಐಎಡಿಬಿ.ಯು ಶೇ.25 ರಷ್ಟು ರಿಯಾಯಿತಿ ದರದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡುವ ಯೋಜನೆಗೆ ಅನುದಾನ ಬಿಡುಗಡೆ ಮಾಡದ ಕಾರಣ, ಸರ್ಕಾರವು ಅನುದಾನ ಬಿಡುಗಡೆ ಮಾಡುವವರೆಗೂ ಮಂಡಳಿ ಹಿತದೃಷ್ಟಿಯಿಂದ ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲು ನಿರ್ಣಯ ಕೈಗೊಳ್ಳಲಾಗಿತ್ತು. ಅದರಂತೆ, ಸದರಿ ವರ್ಗದ ಉದ್ದಿಮೆದಾರರಿಗೆ ರಿಯಾಯಿತಿ ನೀಡುವುದನ್ನು ಸ್ಥಗಿತಗೊಳಿಸಲಾಗಿರುತ್ತದೆ. ಸದರಿ ಸಭೆಯ ನಿರ್ಣಯವನ್ನು **ಅನುಬಂಧ-3** ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: ಸಿಐ 490 ಐಎಪಿ 2024**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಅನುಬಂಧ - 1

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕೆ.ಎಸ್.ಎಸ್.ಐ.ಡಿ.ಸಿ./ಕೆ.ಐ.ಎ.ಡಿ.ಬಿ., ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು/ಪ್ರದೇಶಗಳಲ್ಲಿ ನಿವೇಶನಗಳನ್ನು ವಿವಿಧ ವರ್ಗದ ಕೈಗಾರಿಕೋದ್ಯಮಿಗಳಿಗೆ ಮೀಸಲಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಕೈಅ/ಇ1/1455/2016-17, ದಿ: 15.04.2016.
2. ಸರ್ಕಾರದ ಆದೇಶ ಸಂ: ಸಿಐ 148 ಸಿಎಸ್‌ಸಿ 2015, ದಿ: 27.06.2015.

****

**ಪ್ರಸ್ತಾವನೆ:**

2016-17ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 379ರಲ್ಲಿ "2014ರಲ್ಲಿ ತರಲಾದ ಕೈಗಾರಿಕಾ ನೀತಿಯಲ್ಲಿ ಕೆಐಎಡಿಬಿ ಸಂಸ್ಥೆಯು ಅಭಿವೃದ್ಧಿಪಡಿಸುವ ಕೈಗಾರಿಕಾ ಶೆಡ್/ನಿವೇಶನಗಳಲ್ಲಿ ಶೇ.5ರಷ್ಟನ್ನು ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ, ಅಲ್ಪಸಂಖ್ಯಾತರಿಗೆ, ಅಂಗವಿಕಲರಿಗೆ ಮತ್ತು ಮಾಜಿ ಸೈನಿಕರಿಗೆ ಮೀಸಲಿರಿಸಲಾಗಿದ್ದು, ಇದನ್ನು ಶೇ.5 ರಿಂದ 10ಕ್ಕೆ ಹೆಚ್ಚಿಸಲಾಗುವುದು. ಈ ಮೀಸಲಾತಿಯನ್ನು ಕೆಐಎಡಿಬಿ ಮತ್ತು ಕೆಎಸ್‌ಎಸ್‌ಐಡಿಸಿ ಸಂಸ್ಥೆಗಳು ಅಭಿವೃದ್ಧಿಪಡಿಸಿ ಹಂಚಿಕೆ ಮಾಡುವ ಕೈಗಾರಿಕಾ ಶೆಡ್/ನಿವೇಶನಗಳಿಗೆ ಅನ್ವಯಿಸಲಾಗುವುದು. ಈ ಮೊತ್ತವನ್ನು 6 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಬಹುದಾಗಿರುತ್ತದೆ" ಎಂದು ಘೋಷಿಸಲಾಗಿದೆ. ಅದರಂತೆ, ವಿವಿಧ ವರ್ಗದ ಸಮುದಾಯಕ್ಕೆ ಸೇರಿದ ಕೈಗಾರಿಕೋದ್ಯಮಿಗಳಿಗೆ ಕೈಗಾರಿಕಾ ಪ್ರದೇಶ/ವಸಾಹತುಗಳಲ್ಲಿ ನಿವೇಶನ/ಶೆಡ್‌ಗಳ ಹಂಚಿಕೆಯಲ್ಲಿ ಮೀಸಲಾತಿ ನೀಡುವ ಕುರಿತು, ಓದಲಾದ ಕ್ರಮಾಂಕ (2) ರ ಸರ್ಕಾರಿ ಆದೇಶದಲ್ಲಿ ಮೀಸಲಾತಿಯ ಪ್ರಮಾಣವನ್ನು ನಿಗದಿಪಡಿಸಲಾಗಿದ್ದು, ಈ ಮೀಸಲಾತಿಯ ಆದೇಶಕ್ಕೆ ಸೂಕ್ತ ತಿದ್ದುಪಡಿಗಳನ್ನು ತಂದು 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾದಂತೆ ಮೀಸಲಾತಿ ಪ್ರಮಾಣವನ್ನು ಪರಿಷ್ಕರಿಸುವ ಕುರಿತು ಆಯುಕ್ತರು, ಕೈಗಾರಿಕಾಭಿವೃದ್ಧಿ ಇವರು ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಮುಂದಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 82 ಸಿಎಸ್‌ಸಿ 2016, ಬೆಂಗಳೂರು, ದಿನಾಂಕ: 05.05.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಹೊಸ ಕೈಗಾರಿಕಾ ನೀತಿ 2014-19ರಲ್ಲಿ ಘೋಷಿಸಿರುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ)

ವತಿಯಿಂದ ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶದಲ್ಲಿ ಹಂಚಿಕೆಗೆ ಅರ್ಹವಿರುವ ನಿವೇಶನಗಳ ಒಟ್ಟು ವಿಸ್ತೀರ್ಣದಲ್ಲಿ ಕನಿಷ್ಠ ಶೇ. 20ರಷ್ಟು ಭಾಗವನ್ನು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವರ್ಗದ (ಎಂಎಸ್‌ಎಂಇ) ಉದ್ದಿಮೆಗಳಿಗೆ ಮೀಸಲಿಡತಕ್ಕದ್ದು.

ಮುಂದುವರೆದು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ (ಕೆಎಸ್‌ಎಸ್‌ಐಡಿಸಿ) ಅಭಿವೃದ್ಧಿಪಡಿಸಲಾಗುವ ಹೊಸ ಕೈಗಾರಿಕಾ ಪ್ರದೇಶ/ ವಸಾಹತುಗಳಲ್ಲಿನ ನಿವೇಶನ / ಶೆಡ್‌ಗಳ ಹಂಚಿಕೆಯಲ್ಲಿ ಈ ಕೆಳಕಂಡಂತೆ ಶೇಕಡವಾರು ಮೀಸಲಾತಿಯನ್ನು ಅನುಸರಿಸಿ ಹಂಚಿಕೆ ಮಾಡತಕ್ಕದೆಂದು ಆದೇಶಿಸಲಾಗಿದೆ.

- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಮಹಿಳಾ ಉದ್ದಿಮೆದಾರರಿಗೆ ಕನಿಷ್ಠ ಶೇ. 5ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಉದ್ದಿಮೆದಾರರಿಗೆ ಕನಿಷ್ಠ ಶೇ. 22.50ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು.
- ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸುವ ಕೈಗಾರಿಕಾ ವಸಾಹತು / ಪ್ರದೇಶಗಳಲ್ಲಿ ಅಲ್ಪಸಂಖ್ಯಾತ, ಹಿಂದುಳಿದ ವರ್ಗ (ವರ್ಗ-1 ಮತ್ತು 2ಎ), ವಿಕಲಚೇತನ ಹಾಗೂ ಮಾಜಿ ಸೈನಿಕ ಉದ್ದಿಮೆದಾರರಿಗೆ ಕನಿಷ್ಠ ಶೇ. 10ರಷ್ಟು ನಿವೇಶನ/ ಶೆಡ್‌ಗಳನ್ನು ಮೀಸಲಿಡತಕ್ಕದ್ದು ಹಾಗೂ ಈ ವರ್ಗದ ಉದ್ದಿಮೆದಾರರು ನಿವೇಶನ/ ಶೆಡ್‌ಗಳ *ಮೊತ್ತವನ್ನು 6 ಸಮ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸತಕ್ಕದ್ದು.*

ಈ ಹಿಂದೆ ವಿವಿಧ ವರ್ಗಗಳ ಸಮುದಾಯದ ಉದ್ದಿಮೆದಾರರಿಗೆ ಮೀಸಲಾತಿ ನಿರ್ಧರಿಸುವ ಕುರಿತು ಹೊರಡಿಸಲಾದ ಸರ್ಕಾರಿ ಆದೇಶ ಸಂ: ಸಿಐ 148 ಸಿಎಸ್‌ಸಿ 2015, ದಿ: 27.06.2015 ಅನ್ನು ಹಿಂಪಡೆಯಲಾಗಿದೆ. ಕೆ.ಎಸ್.ಎಸ್.ಐ.ಡಿ.ಸಿ. ಮತ್ತು ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಈ ಮೀಸಲಾತಿ ಆದೇಶವನ್ನು ತತ್‌ಕ್ಷಣದಿಂದ ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

05.05.2016

(ಎಲ್.ಎಸ್. ಶ್ರೀಕಂಠಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಲಾಗಿದೆ.

<u>ಪ್ರತಿಯನ್ನು:</u>

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.

ಅನುಬಂಧ-2

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೆ.ಐ.ಎ.ಡಿ.ಬಿ / ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಗಳಿಂದ ಹಂಚಿಕೆ ಮಾಡಲಾಗುವ ಪ್ಲಾಟ್ / ಶೆಡ್ಡುಗಳ ಒಟ್ಟು ಮೊತ್ತದಲ್ಲಿ ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1, ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ) ಶೇ.25 ರಷ್ಟು ರಿಯಾಯಿತಿ ನೀಡುವ ಬಗ್ಗೆ.

16089 02 JAN 2018 36929

ಓದಲಾಗಿದೆ: ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಕೈಅ/ಇ5/12/ಮ.ಪ್ಲಾ.ಶೇ/2017-18, ದಿನಾಂಕ 08.05.2017.

=000=

ಪ್ರಸ್ತಾವನೆ:

2017-18ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ 406 ರಲ್ಲಿ *"ಕೆ.ಐ.ಎ.ಡಿ.ಬಿ / ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಗಳಿಂದ ಹಿಂದುಳಿದ ಪ್ರವರ್ಗ-1, ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ ರವರಿಗೆ ಮಂಜೂರು / ಹಂಚಿಕೆ ಮಾಡಲಾಗುವ ಪ್ಲಾಟ್ / ಶೆಡ್ಡುಗಳ ಒಟ್ಟು ಮೊತ್ತದಲ್ಲಿ ಶೇ.25 ರಷ್ಟು ರಿಯಾಯಿತಿ ನೀಡಲಾಗುವುದು. ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಈ ರಿಯಾಯಿತಿಯನ್ನು 1 ಎಕರೆಗೆ ಮತ್ತು ಇತರ ಜಿಲ್ಲೆಗಳಲ್ಲಿ 2 ಎಕರೆಗೆ ಸೀಮಿತಗೊಳಿಸಲಾಗುವುದು* ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಪತ್ರದಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರು ಪ್ರವರ್ಗ-1, ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ ಗೆ ಸೇರಿದ ಉದ್ದಿಮೆದಾರರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ) ಗಳಿಂದ ಹಂಚಿಕೆಯಾಗುವ ಪ್ಲಾಟ್ / ಶೆಡ್ಡುಗಳನ್ನು ರಿಯಾಯಿತಿ ದರದಲ್ಲಿ ನೀಡಲು ಕರಡು ಮಾರ್ಗಸೂಚಿಯೊಂದಿಗೆ ನಿಗದಿತ ನಮೂನೆಯಲ್ಲಿ ಪ್ರಸ್ತಾವನೆ ಸಲ್ಲಿಸಿ, ಯೋಜನೆಯ ಅನುಷ್ಠಾನಕ್ಕೆ ಸರ್ಕಾರದ ಅನುಮೋದನೆಯನ್ನು ನೀಡಲು ಕೋರಿರುತ್ತಾರೆ.

ಈ ಹೊಸ ಯೋಜನೆಗೆ 2017-18ನೇ ಸಾಲಿನ ಆಯವ್ಯಯದಲ್ಲಿ ಇಲಾಖೆಗೆ ಅನುದಾನ ಒದಗಿಸದೆ ಇರುವುದರಿಂದ ಅನುದಾನಕ್ಕಾಗಿ ಹಿಂದುಳಿದ ವರ್ಗಗಳ ಇಲಾಖೆಯನ್ನು ಕೋರಲಾಗಿದ್ದು, ಸದರಿ ಇಲಾಖೆಯು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯೆ ಅನುದಾನ ನಿಗದಿಪಡಿಸಿಕೊಳ್ಳುವಂತೆ ತಿಳಿಸಿರುತ್ತದೆ. ಅನುದಾನ ಒದಗಿಸುವ ಬಗ್ಗೆ ಆರ್ಥಿಕ ಇಲಾಖೆಯು ಸಹಾ ಬೇರೆ ಇಲಾಖೆಗಳಿಂದ ಅನುದಾನ ಒದಗಿಸುವುದು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ. ಈ ವಿಷಯದ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಘೋಷಣೆಯ ಯೋಜನೆಗಳ ಅನುಷ್ಠಾನ ಸರ್ಕಾರದ ಆದ್ಯತೆಯಾಗಿದೆ. ಮೊದಲಿಗೆ ಸದರಿ ಘೋಷಣೆ ಅನ್ವಯ ಕೆ.ಐ.ಎ.ಡಿ.ಬಿ ಮತ್ತು ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಯು ಹಿಂದುಳಿದ ವರ್ಗದ ಅರ್ಹ ಹಂಚಿಕೆದಾರರಿಗೆ ಪ್ಲಾಟ್ / ಶೆಡ್ಡುಗಳನ್ನು ಯೋಜನೆಯನುಸಾರ ಹಂಚಿಕೆ ಮಾಡುವುದು. ತದನಂತರ, ಸದರಿ ಸಂಸ್ಥೆಗಳು ಪ್ರಸಕ್ತ ಸಾಲಿನಲ್ಲಿ ಹಿಂಬರಿಸಬೇಕಾದ ಒಟ್ಟಾರೆ ಮೊತ್ತಕ್ಕೆ ಪ್ರಸ್ತಾವನೆ ಸಲ್ಲಿಸಿದ ತರುವಾಯ ಆಡಳಿತ ಇಲಾಖೆಯು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಮುಂದಿನ ಸೂಕ್ತ ಕ್ರಮ ಜರುಗಿಸಲು ಆದೇಶಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿ ಐ 113 ಎಸ್ ಪಿ ಐ 2017, ಬೆಂಗಳೂರು, ದಿನಾಂಕ 28.12.2017**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಕೆ.ಐ.ಎ.ಡಿ.ಬಿ / ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಗಳಿಂದ ಹಿಂದುಳಿದ ಪ್ರವರ್ಗ-1, ಪ್ರವರ್ಗ-2ಎ ಮತ್ತು ಪ್ರವರ್ಗ-2ಬಿ ರವರಿಗೆ ಮಂಜೂರು / ಹಂಚಿಕೆ ಮಾಡಲಾಗುವ ಪ್ಲಾಟ್ / ಶೆಡ್ಡುಗಳ ಒಟ್ಟು ಮೊತ್ತದಲ್ಲಿ ಶೇ.25 ರಷ್ಟು ರಿಯಾಯಿತಿ ನೀಡಲು ಸರ್ಕಾರವು ತಾತ್ವಿಕ ಅನುಮೋದನೆ (In-principle approval) ನೀಡಿದೆ.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಈ ರಿಯಾಯಿತಿಯನ್ನು 1 ಎಕರೆಗೆ ಮತ್ತು ಇತರ ಜಿಲ್ಲೆಗಳಲ್ಲಿ 2 ಎಕರೆಗೆ ಸೀಮಿತಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ. ಆಇ 190 ವೆಚ್ಚ-1/2017, ದಿನಾಂಕ 18.05.2017 ಮತ್ತು ಆಇ 416 ವೆಚ್ಚ-1/2017, ದಿನಾಂಕ 29.11.2017 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ. ಪಿಡಿ 37 ಎಫ್ಆರ್ಬಿ 2017, ದಿನಾಂಕ 18.05.2017 ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
G. Nagaratnamma.
(ನಾಗರತ್ನಮ್ಮ.ಜಿ) 28/12/17
ಪೀಠಾಧಿಕಾರಿ (ತಾಂತ್ರಿಕ ಕೋಶ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-01.
4. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ.49, ಖನಿಜ ಭವನ, ಡಿ.ದೇವರಾಜು ಅರಸ್ ರಸ್ತೆ, ಬೆಂಗಳೂರು-01.
5. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕೆಐಎಡಿಬಿ, ಖನಿಜ ಭವನ, ಡಿ.ದೇವರಾಜು ಅರಸ್ ರಸ್ತೆ, ಬೆಂಗಳೂರು-01.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು-10.

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಡಾ. ಬಿ. ಆರ್. ಅಂಬೇಡ್ಕರ್ ರಸ್ತೆ,
ಬೆಂಗಳೂರು – 560001.
ದೂ. 080-22034625 ಫ್ಯಾಕ್ಸ್: 080-2235393

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಸಂಖ್ಯೆ: 7733 30 SEP 2020 11532 ಕೇಂದ್ರ ಕಛೇರಿ, ಬೆಂಗಳೂರು

ಸಂಖ್ಯೆ: ಸಿಐ 06 ಎಸ್‌ಪಿಐ 2020 ದಿನಾಂಕ 09.09.2020

ಇವರಿಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ವಿಕಾಸಸೌಧ, ಬೆಂಗಳೂರು-01.

ಇವರಿಗೆ,

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಗಣಿ ಮತ್ತು ಎಂ.ಎಸ್.ಎಂ.ಇ.), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ (ಬಿ&ಆರ್), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4) ನಿರ್ದೇಶಕರು (ಎಂ.ಎಸ್.ಎಂ.ಇ.), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
5) ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ವೆಸ್ಟ್ ಆಫ್ ಕಾರ್ಡ್ ರೋಡ್, ಬೆಂಗಳೂರು-10.
7) ಅಪರ ನಿರ್ದೇಶಕರು (ಜಿಕೈಕೇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

GM

ಮಾನ್ಯರೇ,

**ವಿಷಯ:** ದಿನಾಂಕ 05.09.2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆ ಮಾಡುವ ಕೈಗಾರಿಕಾ ನಿವೇಶನ/ಮಳಿಗೆಗಳಿಗೆ ಸಹಾಯಧನವನ್ನು ಶೇ.50 ರಿಂದ ಶೇ.75ಕ್ಕೆ ಹೆಚ್ಚಿಸಿ ಜಾರಿಗೊಳಿಸುವ ಬಗ್ಗೆ ನಡೆದ ಸಭೆಯ ನಡವಳಿಗಳು.

*****

ದಿನಾಂಕ 05.09.2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆ ಮಾಡುವ ಕೈಗಾರಿಕಾ ನಿವೇಶನ/ಮಳಿಗೆಗಳಿಗೆ ಸಹಾಯಧನವನ್ನು ಶೇ.50 ರಿಂದ ಶೇ.75ಕ್ಕೆ ಹೆಚ್ಚಿಸಿ ಜಾರಿಗೊಳಿಸುವ ಬಗ್ಗೆ ಜರುಗಿದ ಸಭೆಯ ನಡವಳಿಗಳನ್ನು ತಮ್ಮ ಅವಗಾಹನೆ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

G. Nagarathnamma 9/9/2020
(ನಾಗರತ್ನಮ್ಮ .ಜಿ)
ಶಾಖಾಧಿಕಾರಿ (ತಾಂತ್ರಿಕ ಕೋಶ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

Photo copy to GM

AS2/AS5/AS6/AS8

..2

**ದಿನಾಂಕ 05.09.2020 ರಂದು ಪೂರ್ವಾಹ್ನ 11.30 ಗಂಟೆಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆ ಮಾಡುವ ಕೈಗಾರಿಕಾ ನಿವೇಶನ / ಮಳಿಗೆಗಳಿಗೆ ಸಹಾಯಧನವನ್ನು ಶೇಕಡಾ 50 ರಿಂದ ಶೇಕಡಾ 75ಕ್ಕೆ ಹೆಚ್ಚಿಸಿ ಜಾರಿಗೊಳಿಸುವ ಬಗ್ಗೆ ನಡೆದ ಸಭೆಯ ನಡವಳಿಗಳು:-**

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ವಿವರಗಳನ್ನು ಅನುಬಂಧದಲ್ಲಿ ಪಟ್ಟಿ ಮಾಡಿದೆ.

ಪ್ರಾರಂಭದಲ್ಲಿ ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ರವರು ಸಭೆ ಅಧ್ಯಕ್ಷತೆ ವಹಿಸಿದ್ದ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರನ್ನು ಹಾಗೂ ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು.

1) ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯಕಾರಿ ಸದಸ್ಯರು, ಕೆಐಎಡಿಬಿ ಇವರು ಮಾತನಾಡುತ್ತಾ, ಸರ್ಕಾರದ ಆದೇಶ ಸಂಖ್ಯೆ ಸಿಐ 75 ಸಪ್ರಕೈ 2019, ಬೆಂಗಳೂರು ದಿನಾಂಕ 28.05.2020ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ KIADB/KSSIDC ಸಂಸ್ಥೆಗಳಿಂದ ಹಂಚಿಕೆ ಮಾಡುವ ಕೈಗಾರಿಕಾ ನಿವೇಶನ / ಮಳಿಗೆಗಳಿಗೆ ಪ್ರಸ್ತುತ ನೀಡುತ್ತಿರುವ ಸಹಾಯಧನ ಶೇಕಡಾ 50 ರಿಂದ ಶೇಕಡಾ 75ಕ್ಕೆ ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಹೆಚ್ಚಿಸಿ ಜಾರಿಗೊಳಿಸಿದ್ದು, ಸದರಿ ಆದೇಶದಲ್ಲಿ ಎಸ್.ಸಿ.ಪಿ. / ಟಿ.ಎಸ್.ಪಿ. ಯೋಜನೆಗಳಡಿ ಆಯಾ ವರ್ಷ ಲಭ್ಯವಿರುವ ಆಯವ್ಯಯಕ್ಕೆ ಅನುಗುಣವಾಗಿ ಫಲಾನುಭವಿ ಘಟಕಗಳ ಸಂಖ್ಯೆಯನ್ನು ನಿರ್ಬಂಧಿಸಲು ಮತ್ತು ಮುಂಬರುವ ವರ್ಷಗಳಲ್ಲಿ ಆಯವ್ಯಯವನ್ನು ನಿರೀಕ್ಷಿಸಿ ಸದರಿ ಯೋಜನೆಗೆ ವೆಚ್ಚ ಉಂಟು ಮಾಡಬಾರದು ಎಂಬ ಷರತ್ತುಗಳಿರುವುದನ್ನು ಸಭೆಯ ಗಮನಕ್ಕೆ ತಂದರು.

2) ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯಕಾರಿ ಸದಸ್ಯರು, ಕೆಐಎಡಿಬಿ ಇವರು ಮುಂದುವರೆಸುತ್ತಾ, ಈ ಆದೇಶ ಜಾರಿಗೊಳಿಸುವವರೆಗೂ ಚಾಲ್ತಿಯಲ್ಲಿದ್ದಂತೆ KIADB ಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಶೇಕಡಾ 50 ಸಹಾಯಧನದೊಂದಿಗೆ ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡಿರುವ ಸಂಬಂಧ ದಿನಾಂಕ 31.03.2020ರ ಅಂತ್ಯಕ್ಕೆ ರೂ. 113.00 ಕೋಟಿ ಸರ್ಕಾರದಿಂದ KIADBಗೆ ಬಾಕಿ ಬಿಡುಗಡೆಯಾಗಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು. 2020-21ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆಯಡಿ ರೂ. 160 ಕೋಟಿ ಹಾಗೂ ಗಿರಿಜನ ಉಪಯೋಜನೆಯಡಿ ರೂ. 50 ಕೋಟಿ ಅನುದಾನದ ಅವಶ್ಯಕತೆ ಇರುತ್ತದೆ ಎಂದು ಹಾಗೂ ಜೂನ್-2020ರ ಅಂತ್ಯಕ್ಕೆ ನಿವೇಶನ ಹಂಚಿಕೆ ನೀಡಿರುವ ಘಟಕಗಳಿಗೆ ಅಂದಾಜು ರೂ. 40 ಕೋಟಿ ಅನುದಾನದ ಅವಶ್ಯಕತೆ ಇದೆ ಎಂದು ಸಭೆಗೆ ತಿಳಿಸಿದರು.

3) ಅಪರ ನಿರ್ದೇಶಕರು (ಜಿಕೈಕೇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಮಾತನಾಡುತ್ತಾ, 2020-21ನೇ ಸಾಲಿನಲ್ಲಿ ಎಸ್.ಸಿ.ಪಿ. / ಟಿ.ಎಸ್.ಪಿ. ಯೋಜನೆಯಡಿ ಲಭ್ಯವಿರುವ ಒಟ್ಟು ಅಂದಾಜು ರೂ. 50 ಕೋಟಿ ಅನುದಾನವನ್ನು KIADBಗೆ ಬಿಡುಗಡೆ ಮಾಡಬಹುದು ಎಂದು ಸಭೆಗೆ ತಿಳಿಸಿದರು.

c) ಆರ್ಥಿಕ ಇಲಾಖೆಯ ಅಭಿಪ್ರಾಯ ಹಾಗೂ ಸರ್ಕಾರದ ಆದೇಶ ದಿನಾಂಕ 28.05.2020ರನ್ವಯ ಸದರಿ ಯೋಜನೆಯಡಿ Committed liability ಉಂಟು ಮಾಡಬಾರದು ಎಂದು ನಿರ್ಬಂಧಿಸಿರುವುದರಿಂದ, ಹೆಚ್ಚುವರಿ ಆಯವ್ಯಯವನ್ನು ಸಮಾಜ ಕಲ್ಯಾಣ ಇಲಾಖೆಯು ಒದಗಿಸುವವರೆಗೂ ಕೆ.ಐ.ಎ.ಡಿ.ಬಿ.ಯು ಈ ಯೋಜನೆಯನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸುವುದು.

[ಕ್ರಮ: ಪಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ.]

d) ಆರ್ಥಿಕ ಇಲಾಖೆಯು ಹಿಂದುಳಿದ ವರ್ಗಗಳಿಗೆ ಕೆ.ಐ.ಎ.ಡಿ.ಬಿ.ಯು ಶೇ. 25 ರಷ್ಟು ರಿಯಾಯಿತಿ ದರದಲ್ಲಿ ನಿವೇಶನಗಳ ಹಂಚಿಕೆ ಮಾಡುವ ಯೋಜನೆಗೆ ಅನುದಾನವನ್ನು ಬಿಡುಗಡೆ ಮಾಡದ ಕಾರಣ, ಈ ಯೋಜನೆಯನ್ನು ಸಹ ಸರ್ಕಾರವು ಅನುದಾನ ಬಿಡುಗಡೆ ಮಾಡುವವರೆಗೂ ಮಂಡಳಿಯ ಹಿತದೃಷ್ಟಿಯಿಂದ ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸುವುದು.

[ಕ್ರಮ: ಪಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ.].

e) ಈ ಯೋಜನೆಗಾಗಿ ಹೊರಡಿಸಲಾಗಿರುವ ಸರ್ಕಾರದ ಆದೇಶ ದಿನಾಂಕ 28.05.2020ರ **ಕ್ರಸಂ. 7 ರಲ್ಲಿ ವಿಧಿಸಿರುವ ಷರತ್ತು** ಅನುಷ್ಠಾನಕ್ಕಾಗಿ ಗೊಂದಲಗಳೇನಾದರೂ ಇದ್ದಲ್ಲಿ, ಸದರಿ ಆದೇಶದಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳ ಪರಿಮಿತಿಯೊಳಗೆ ಪರಿಹಾರ ಮಾರ್ಗ / ಸಲಹೆಗಳೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

[ಕ್ರಮ: ಪಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ.].

ಚರ್ಚೆಗೆ ಇನ್ನಾವುದೇ ವಿಷಯಗಳು ಇಲ್ಲದಿರುವುದರಿಂದ ಸಭಾಧ್ಯಕ್ಷರಿಗೆ ವಂದನೆ ಸೂಚಿಸಿರುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗೌರವ ಗುಪ್ತ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ